# ಕರ್ನಾಟಕ ಸರ್ಕಾರ

ಸಂ:ಸಕನಿ/ಸಿಬ್ಬಂದಿ-1/ಸಿಆರ್-15/2021-22

ಸಮಾಜ ಕಲ್ಯಾಣ ಆಯುಕ್ತರ ಕಛೇರಿ,
5ನೇ ಮಹಡಿ, ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 16-02-2023

## ಅಧಿಕೃತ ಜ್ಞಾಪನ

ವಿಷಯ: ಸಮಾಜ ಕಲ್ಯಾಣ ಇಲಾಖೆಯ ಗ್ರೂಪ್-ಬಿ ವೃಂದದ ಸಹಾಯಕ ನಿರ್ದೇಶಕರು ಗ್ರೇಡ್-2 ಮತ್ತು ಪತ್ರಾಂಕಿತ ವ್ಯವಸ್ಥಾಪಕರ (ವೇತನ ಶ್ರೇಣಿ ರೂ. 43100-83900),ವೃಂದದ ಅಧಿಕಾರಿಗಳ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ದಿನಾಂಕ:01-01-2023 ರಲ್ಲಿದ್ದಂತೆ ಪ್ರಕಟಿಸುವ ಕುರಿತು.

ಉಲ್ಲೇಖ:
1) ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ:ಸಿಆಸುಇ 106 ಸೇನೆನಿ 2021, **ದಿನಾಂಕ:10-12-2021**.
2) ಸರ್ಕಾರದ ಅಧಿಸೂಚನೆ ಸಂಖ್ಯೆ:ಎಸ್.ಡಬ್ಲ್ಯೂ.ಡಿ 97 ಪಿಕೆಎಸ್ 2022 **ದಿನಾಂಕ:28-12-2022**
3) ಈ ಕಚೇರಿ ಪತ್ರದ ಸಮಸಂಖ್ಯೆ **ದಿನಾಂಕ:24-01-2023**

******

ವಿಷಯಕ್ಕೆ ಸಂಬಂಧಿಸಿದಂತೆ ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳನ್ನು ಭರ್ತಿ ಮಾಡುವಾಗ ರಿಕ್ತಸ್ಥಾನ ಆಧಾರಿತ ವರ್ಗೀಕರಣದ ಬದಲಾಗಿ ಹುದ್ದೆ ಆಧಾರಿತ ವರ್ಗೀಕರಣವನ್ನು ಅನುಸರಿಸಿ ಭರ್ತಿ ಮಾಡುವ ಬಗ್ಗೆ ಉಲ್ಲೇಖ(1)ರ ಸರ್ಕಾರದ ಅಧಿಕೃತ ಜ್ಞಾಪನದನ್ವಯ ಮಾರ್ಗಸೂಚಿಗಳನ್ನು ಹೊರಡಿಸಲಾಗಿರುತ್ತದೆ. ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತೆ) ನಿಯಮಗಳು 1957 ರ ನಿಯಮ 10 ರಡಿ ಜೇಷ್ಠತಾ ಪಟ್ಟಿಗಳನ್ನು ಸಿದ್ಧಪಡಿಸುವುದಕ್ಕೆ ಸಂಬಂಧಿಸಿದಂತೆ ಈ ಹಿಂದೆ ಹೊರಡಿಸಲಾಗಿರುವ ಆದೇಶಗಳನ್ನು ಪುನರಾವಲೋಕನೆ ಮಾಡಿ, ನಮೂನೆಗಳನ್ನು ಪರಿಷ್ಕೃತಗೊಳಿಸಿ ಅನುಬಂಧ-1 ಮತ್ತು ಅನುಬಂಧ-2 ರಲ್ಲಿರುವಂತೆ ಸಿದ್ಧಪಡಿಸಿ ಪ್ರತಿ ವರ್ಷವೂ ಡಿಸೆಂಬರ್-31 ಕ್ಕೆ ಅಂತ್ಯಗೊಂಡಂತೆ ತಾತ್ಕಾಲಿಕ ಜೇಷ್ಠತಾ ಪಟ್ಟಿಗಳನ್ನು ಪ್ರಕಟಿಸಲು ನಿರ್ದೇಶನವಿರುತ್ತದೆ. ಉಲ್ಲೇಖ(2) ರ ಸರ್ಕಾರದ ಅಧಿಸೂಚನೆ ಮೂಲಕ ರಚಿಸಲಾದ ಸಮಾಜ ಕಲ್ಯಾಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳು ರಾಜ್ಯ ಪತ್ರದಲ್ಲಿ ಅಧಿಕೃತವಾಗಿ ಪ್ರಕಟಗೊಂಡ ದಿನಾಂಕದಿಂದ ಜಾರಿಗೆ ಬಂದಿರುತ್ತದೆ.

ಅದರನ್ವಯ ಸಮಾಜ ಕಲ್ಯಾಣ ಇಲಾಖೆಯ ಇಲಾಖಾ ವೃಂದ ಮತ್ತು ನೇಮಕಾತಿ ನಿಯಮಗಳು 2022ರ ಷೆಡ್ಯೂಲ್ ಕ್ರಮ ಸಂಖ್ಯೆ 9 ರಲ್ಲಿನ ವೇತನ ಶ್ರೇಣಿ ರೂ. 43,100-83900 ರಡಿಯ ಗ್ರೂಪ್-ಬಿ ಸಹಾಯಕ ನಿರ್ದೇಶಕರು ಗ್ರೇಡ್-2 ಹುದ್ದೆಯನ್ನು ಶೇ. 40 ರಷ್ಟು ನೇರ ನೇಮಕಾತಿ ಮೂಲಕ ಹಾಗೂ ಶೇ.60 ರಷ್ಟು ಕಛೇರಿ ಅಧೀಕ್ಷಕರು ಮತ್ತು ಸೀನಿಯರ್ ವಾರ್ಡನ್ (ಮಹಿಳೆ)/ ಸೀನಿಯರ್ ವಾರ್ಡನ್ (ಪುರುಷ) ವೃಂದದಿಂದ ಮುಂಬಡ್ತಿ ಮೂಲಕ 8:1:1ರ ಅನುಪಾತದಲ್ಲಿ ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿದೆ.

ಷೆಡ್ಯೂಲ್ ಕ್ರಮ ಸಂಖ್ಯೆ 11 ರಲ್ಲಿನ ವೇತನ ಶ್ರೇಣಿ ರೂ. 43,100-83900 ರಡಿಯ ಗ್ರೂಪ್-ಬಿ ಪತ್ರಾಂಕಿತ ವ್ಯವಸ್ಥಾಪಕರ ಹುದ್ದೆಯನ್ನು ಶೇ.100 ರಷ್ಟು ಕಛೇರಿ ಅಧೀಕ್ಷಕರು ಮತ್ತು ಸೀನಿಯರ್ ವಾರ್ಡನ್ (ಮಹಿಳೆ) / ಸೀನಿಯರ್ ವಾರ್ಡನ್ (ಪುರುಷ) ವೃಂದದಿಂದ ಮುಂಬಡ್ತಿ ಮೂಲಕ 8:1:1ರ ಅನುಪಾತದಲ್ಲಿ ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿದೆ.

ಉಲ್ಲೇಖ(3) ರ ಈ ಕಛೇರಿ ಪತ್ರದಲ್ಲಿ ಸಹಾಯಕ ನಿರ್ದೇಶಕರು ಗ್ರೇಡ್-2 ಹುದ್ದೆಗೆ ಮುಂಬಡ್ತಿ ಹೊಂದಿ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿಗಳ ಜೇಷ್ಠತೆಯನ್ನು ಸಹಾಯಕ ನಿರ್ದೇಶಕರು ಗ್ರೇಡ್-2 ಅಥವಾ ಪತ್ರಾಂಕಿತ ವ್ಯವಸ್ಥಾಪಕರ ಹುದ್ದೆಯಲ್ಲಿ ನಿಗದಿಪಡಿಸುವ ಕುರಿತು ಅಧಿಕಾರಿಗಳ ಅಭಿಮತ ಪತ್ರವನ್ನು ಪಡೆದು ಪರಿಶೀಲಿಸಲಾಗಿದೆ.

ಅದರಂತೆ ದಿನಾಂಕ:01-01-2023 ರಲ್ಲಿದ್ದಂತೆ ಸಹಾಯಕ ನಿರ್ದೇಶಕರು ಗ್ರೇಡ್-2 ಮತ್ತು ಪತ್ರಾಂಕಿತ ವ್ಯವಸ್ಥಾಪಕರ ಹುದ್ದೆಯ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಕೆಳಕಂಡ ಅನುಬಂಧದಂತೆ ಇಲಾಖಾ ವೆಬ್ ಸೈಟ್ www.sw.kar.nic.in ನಲ್ಲಿ ಪ್ರಕಟಿಸಲಾಗಿದೆ.

| ಕ್ರ.ಸಂ. | ವೃಂದ | ವಿವರ | ಅನುಬಂಧ |
|---|---|---|---|
| 1. | ಸಹಾಯಕ ನಿರ್ದೇಶಕರು ಗ್ರೇಡ್-2 | ಹುದ್ದೆಗಳ ವಾಸ್ತವಿಕ ಮಾಹಿತಿ | ಅನುಬಂಧ-1 (ಭಾಗ-1) |
| 2. | ಸಹಾಯಕ ನಿರ್ದೇಶಕರು ಗ್ರೇಡ್-2 | ಹೈ.ಕ. ಹಾಗೂ ಉಳಿಕೆ ಮೂಲ ವೃಂದ ತಾತ್ಕಾಲಿಕ ಜೇಷ್ಠತಾ ಪಟ್ಟಿ | ಅನುಬಂಧ-1 (ಭಾಗ-ii) |
| 3. | ಪತ್ರಾಂಕಿತ ವ್ಯವಸ್ಥಾಪಕರು | ಹೈ.ಕ. ಹಾಗೂ ಉಳಿಕೆ ಮೂಲ ವೃಂದ ತಾತ್ಕಾಲಿಕ ಜೇಷ್ಠತಾ ಪಟ್ಟಿ | ಅನುಬಂಧ-2 |
| 4. | ಸಹಾಯಕ ನಿರ್ದೇಶಕರು ಗ್ರೇಡ್-2 ಹಾಗೂ ಪತ್ರಾಂಕಿತ ವ್ಯವಸ್ಥಾಪಕರು | ಹೈ.ಕ. ಹಾಗೂ ಉಳಿಕೆ ಮೂಲ ವೃಂದ ತಾತ್ಕಾಲಿಕ ಅಂತರ ಜೇಷ್ಠತಾ ಪಟ್ಟಿ | ಅನುಬಂಧ-3 |

ಸದರಿ ತಾತ್ಕಾಲಿಕ ಜೇಷ್ಠತಾ ಪಟ್ಟಿಯಿಂದ ಬಾಧಿತರಾಗುವ ಎಲ್ಲಾ ಅಧಿಕಾರಿಗಳು ಹೆಸರು, ನೇಮಕಾತಿ ವಿಧಾನ, ಮೀಸಲಾತಿ ವರ್ಗ, ಜನ್ಮ ದಿನಾಂಕ, ಸೇವೆಗೆ ಸೇರಿದ ದಿನಾಂಕ, ನೇರ ನೇಮಕಾತಿ/ಮುಂಬಡ್ತಿ ಜೇಷ್ಠತೆಗೆ ಪರಿಗಣಿಸಲಾದ ಅರ್ಹ ದಿನಾಂಕದಲ್ಲಿ ವ್ಯತ್ಯಾಸ ಲೋಪ-ದೋಷಗಳಿದ್ದಲ್ಲಿ ತಮ್ಮ ಆಕ್ಷೇಪಣೆಯನ್ನು ಜಿಲ್ಲಾ ಮಟ್ಟದ ಅಧಿಕಾರಿಗಳ ಮೂಲಕ ದಿನಾಂಕ: 28-02-2023 ರೊಳಗೆ ಸಲ್ಲಿಸಲು ಕಾಲಾವಕಾಶ ನೀಡಲಾಗಿದೆ. ನಿಗಧಿತ ಅವಧಿಯ ನಂತರ ಸ್ವೀಕೃತಗೊಳ್ಳುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

16/02.23

ಆಯುಕ್ತರು
ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.

**ಪ್ರತಿಯನ್ನು ಮಾಹಿತಿ ಹಾಗೂ ಸೂಕ್ತಕ್ರಮಕ್ಕಾಗಿ,**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
2. ಮಹಾಲೇಖಪಾಲರು, ಎ&ಇ (GE Cell-II), ಹೊಸ ಕಟ್ಟಡ, ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
3. ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ಎಲ್ಲಾ ಜಿಲ್ಲೆಗಳು.
4. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು.

5. ವ್ಯವಸ್ಥಾಪಕ ನಿರ್ದೇಶಕರು, ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಬೆಂಗಳೂರು,
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ, ಬೆಂಗಳೂರು.
7. ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗ, ಬೆಂಗಳೂರು.
8. ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ, ಬೆಂಗಳೂರು.
9. ಎಲ್ಲಾ ಜಿಲ್ಲೆಗಳ ಜಂಟಿ/ ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ.
10. ಯೋಜನಾ ಸಮನ್ವಯಾಧಿಕಾರಿಗಳು, ಸಮಗ್ರ ಗಿರಿಜನ ಅಭಿವೃದ್ಧಿ ಯೋಜನೆ ಸಂಬಂಧಿಸಿದ ಜಿಲ್ಲೆಗಳು.
11. ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು, ಸಂಬಂಧಿಸಿದ ಜಿಲ್ಲೆಗಳು,
12. ಸಂಬಂಧಪಟ್ಟ ಸಹಾಯಕ ನಿರ್ದೇಶಕರಿಗೆ ಆಯಾ ಜಿಲ್ಲಾ ಮಟ್ಟದ ಅಧಿಕಾರಿಗಳ ಮೂಲಕ.
13. ಕೇಂದ್ರ ಕಛೇರಿಯ ಸಂಬಂಧಿಸಿದ ಅಧಿಕಾರಿಗಳಿಗೆ.
14. ಕಛೇರಿ ಪ್ರತಿ /ಇತರೆ.